ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಈ ಗ್ರಾಮದಲ್ಲಿ 1991ರ ಜನಗಣತಿಯಂತೆ ಒಟ್ಟು ಜನಸಂಖ್ಯೆ 238 ಇದ್ದು, ಇದರಲ್ಲಿ ಪರಿಶಿಷ್ಟ ಜಾತಿ ಜನಸಂಖ್ಯೆಯು 57 ಹಾಗೂ ಪರಿಶಿಷ್ಟ ಪಂಗಡದ ಜನಸಂಖ್ಯೆಯು 12 ಇರುತ್ತದೆ. ಇದು ಗ್ರಾಮದ ಒಟ್ಟು ಜನಸಂಖ್ಯೆ ಶೇ.29ರಷ್ಟು ಇರುತ್ತದೆ.

ಆ) ಜಿಲ್ಲೆಯಿಂದ ಹಿರೇಬೂದನೂರು ಗ್ರಾಮದಲ್ಲಿ ಆಶ್ರಮಶಾಲೆಯನ್ನು ಪ್ರಾರಂಭಿಸಲು ಸೂಕ್ತ ಪ್ರಸ್ತಾವನೆ ಬಂದಲ್ಲಿ ಇದರ ಬಗ್ಗೆ ಪರಿಶೀಲಿಸಲಾಗುವುದು

ವಸತಿ ನಿಲಯದ ಕಟ್ಟಡ ಕಟ್ಟುವುದು.

281(236)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಬೈಲವಾಡ ಗ್ರಾಮದಲ್ಲಿ ಬಿಸಿಎಂ ಇಲಾಖೆಯ ಮೆಟ್ರಿಕ್-ಪೂರ್ವ ಬಾಲಕರ ವಸತಿನಿಲಯದ ಕಟ್ಟಡ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬೆಳಗಾಂ ಜಿಲ್ಲೆಯಲ್ಲಿ ಬಿಸಿಎಂ ಇಲಾಖೆಯ ಎಷ್ಟು ವಸತಿ ನಿಲಯಗಳಿಗೆ ಕಟ್ಟಡ ಇರುವುದಿಲ್ಲ ಹಾಗೂ ಈ ಕಟ್ಟಡಗಳನ್ನು ಕಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ.

ಇ) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನಲ್ಲಿ ಎಷ್ಟು ವಸತಿ ನಿಲಯಗಳಿಗೆ ಕಟ್ಟಡ ಇರುವುದಿಲ್ಲ ಹಾಗೂ ಈ ಕಟ್ಟಡಗಳನ್ನು ಕಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಈ) ಹಾಗಿದ್ದಲ್ಲಿ ಬೈಲಹೊಂಗಲ ತಾಲ್ಲೂಕಿನ ಬೈಲವಾಡ ಗ್ರಾಮದಲ್ಲಿ ಬಿಸಿಎಂ ಇಲಾಖೆಯ ಮೆಟ್ರಿಕ್-ಪೂರ್ವ ಬಾಲಕರ ವಸತಿನಿಲಯ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) ಬೆಳಗಾಂ ಜಿಲ್ಲೆಯಲ್ಲಿ 100 ವಿದ್ಯಾರ್ಥಿನಿಲಯಗಳ ಪೈಕಿ 40 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ. ಆಯವ್ಯಯದಲ್ಲಿ ಒದಗಿಸಲಾಗುವ ಹಣದ ಗಾತ್ರದ ಮೇರೆಗೆ ಇಲಾಖೆಯಲ್ಲಿನ ವಿದ್ಯಾರ್ಥಿನಿಲಯಗಳಿಗೆ ಹಂತ ಹಂತವಾಗಿ ಸ್ವಂತ ಕಟ್ಟಡವನ್ನು ನಿರ್ಮಿಸಲಾಗುತ್ತಿದೆ.

ಇ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿ 12 ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳಿದ್ದು, ಈ ಪೈಕಿ 7 ನಿಲಯಗಳಿಗೆ ಸ್ವಂತ ಕಟ್ಟಡಗಳು ಇರುತ್ತದೆ. ಉಳಿದ 5 ನಿಲಯಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ. ನಿವೇಶನದ ಲಭ್ಯತೆ ಹಾಗೂ ಆಯವ್ಯಯದ ಹಣದ ಅವಕಾಶವನ್ನು ಪರಿಶೀಲಿಸಿ ವಿದ್ಯಾರ್ಥಿನಿಲಯಗಳ ಕಟ್ಟಡಗಳ ನಿರ್ಮಾಣವನ್ನು ಹಂತ ಹಂತವಾಗಿ ನಿರ್ಮಿಸಲಾಗುತ್ತಿದೆ.

ಈ) ಕಟ್ಟಡವನ್ನು ನಿರ್ಮಿಸಲು ಸೂಕ್ತ ನಿವೇಶನವನ್ನು ಪಡೆಯಲು ಕ್ರಮ ವಹಿಸಲಾಗಿದೆ. ನಿವೇಶನವನ್ನು ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಮೆಟ್ರಿಕ್-ಪೂರ್ವ ಬಾಲಕಿಯರ ವಸತಿ ನಿಲಯಗಳನ್ನು ಪ್ರಾರಂಭಿಸುವುದು.

282(238)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಬೆಳಗಾಂ ಜಿಲ್ಲೆ, ಸವದತ್ತಿ ತಾಲ್ಲೂಕಿನ ಹಿರೇಬೂದನೂರು ಗ್ರಾಮದಲ್ಲಿ ಪ್ರತಿಶತ 90ರಷ್ಟು ಜನ ಪರಿಶಿಷ್ಟ ವರ್ಗ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದವರಾಗಿರುವವರು ಎಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಈ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಯಿದ್ದು, ಬಾಲಕಿಯರ ವಸತಿ ಸೌಕರ್ಯಕ್ಕಾಗಿ ಯಾವುದೇ ವಸತಿನಿಲಯಗಳು ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

3) ಈ ಗ್ರಾಮದಲ್ಲಿ ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗ ಹಾಗೂ ಪರಿಶಿಷ್ಟ ಪಂಗಡದ ಜನಾಂಗ ಹೆಚ್ಚಿಗೆ ಇರುವುದರಿಂದ ಹಾಗೂ ಇಲ್ಲಿನ ವಿದ್ಯಾರ್ಥಿನಿಯರ ವಿದ್ಯಾಭ್ಯಾಸಕ್ಕೆ ಅನುಕೂಲವಾಗಲು ಈ ಗ್ರಾಮದಲ್ಲಿ ಪರಿಶಿಷ್ಟ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಮೆಟ್ರಿಕ್-ಪೂರ್ವ ಬಾಲಕಿಯರ ವಸತಿ ನಿಲಯವನ್ನು ಪ್ರಾರಂಭಿಸಲು